**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ ಸಿ ಸಂಃ 613/2019**

| | | |
|---|---|---|
| ಸಾಕ್ಷಿಯ ಹೆಸರುಃ | ಚಂದ್ರ | ಫ್ರಾಸಾಃಃ 9 |
| ತಂದೆ ಹೆಸರುಃ | ಜವರೇಗೌಡ | ಚಾಸಾಃಃ 9 |
| ವಯಸ್ಸುಃ | 33 ವರ್ಷ | ಪ್ರಮಾಣೀಕರಿಸಿದ<br>ದಿಃ 20/01/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಚಿಕ್ಕಹನಸೋಗೆ ಗ್ರಾಮ, | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನನಗೆ ಆರೋಪಿತ ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಆರೋಪಿತರು ಪಡಿತರ ಚೀಟಿಯ ಅಕ್ಕಿ ತೆಗೆದುಕೊಳ್ಳುತ್ತಿದ್ದನ್ನು ನಾನು ನೋಡಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ18/06/2016 ರಂದು ಮಧ್ಯಾಹ್ನ 2.45 ಗಂಟೆ ಸಮಾರಿಗೆ ಆರೋಪಿತರು ಸರ್ಕಾರಿ ಪಡಿತರ ಚೀಟಿದಾರರಿಗೆ ಅನ್ನಭಾಗ್ಯ ಯೋಜನೆಯಡಿಯಲ್ಲಿ ಉಚಿತವಾಗಿ ನೀಡುತ್ತಿರುವ ಅಕ್ಕಿ ಮತ್ತು ಗೋದಿಯನ್ನು ಅಕ್ರಮವಾಗಿ ಖರೀದಿಸಿ, ದಾಸ್ತಾನು ಮಾಡಿ ಅಕ್ರಮವಾಗಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದರು ಎಂದರೆ ಸರಿಯಲ್ಲ. ಅದನ್ನು ಕೆಎ-45-5143 ಬೊಲೆರೋ ವಾಹನದಲ್ಲಿ ಸಾಗಾಟ ಮಾಡುತ್ತಿದ್ದರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರವಾಗಿ ನಾನು ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ.

ಸದರಿ ಹೇಳಿಕೆಯನ್ನು **ನಿಪಿ.12** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**
**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**